**All India Radio: Bangalore**
**National Bulletin In Kannada**
**29.06.2026 19.35 hrs**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**29.06.2026 19.35 hrs**

---

ಮುಖ್ಯಾಂಶಗಳು

೧. ನವದೆಹಲಿಯಲ್ಲಿ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ಶೌರ್ಯ ಪ್ರಶಸ್ತಿ ಪ್ರದಾನ

೨. ನೂತನವಾಗಿ ಆಯ್ಕೆಯಾದ ಎಂಟು ರಾಜ್ಯಸಭಾ ಸದಸ್ಯರಿಂದ ಪ್ರಮಾಣವಚನ ಸ್ವೀಕಾರ

೩. ಯಮುನಾ ಜಲ ಒಪ್ಪಂದಕ್ಕೆ ಹರಿಯಾಣ, ರಾಜಸ್ಥಾನ ಸರ್ಕಾರಗಳು ಸಹಿ

೪. ಯುಎಸ್ ಓಪನ್ ಬ್ಯಾಡ್ಮಿಂಟನ್; ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಭಾರತದ ಕಿಡಂಬಿ ಶ್ರೀಕಾಂತ್‌ಗೆ ಬೆಳ್ಳಿ

---

ರಾಷ್ಟ್ರಪತಿ ಭವನದಲ್ಲಿ ಇಂದು ಸಂಜೆ ನಡೆದ ಎರಡನೇ ರಕ್ಷಣಾ ಹೂಡಿಕೆ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಶೌರ್ಯ ಪ್ರಶಸ್ತಿಗಳನ್ನು ಪ್ರದಾನ ಮಾಡಿದರು.

ಏರ್ ಮಾರ್ಷಲ್ ತರುಣ್ ಚೌಧರಿ, ಲೆಫ್ಟಿನೆಂಟ್ ಜನರಲ್ ನೀರಜ್ ವರ್ಷ್ಣೆ, ಲೆಫ್ಟಿನೆಂಟ್ ಜನರಲ್ ವಿಕಾಸ್ ರೋಹೆಲ್ಲಾ, ಲೆಫ್ಟಿನೆಂಟ್ ಜನರಲ್ ಹರ್ಬಿಂದರ್ ಸಿಂಗ್ ವಂದ್ರಾ ಮತ್ತು ಲೆಫ್ಟಿನೆಂಟ್ ಜನರಲ್ ಮೊಹಿಂದರ್ ಪಾಲ್ ಸಿಂಗ್ ಅವರಿಗೆ ಅತಿ ವಿಶಿಷ್ಟ ಸೇವಾ ಪದಕ ಪ್ರದಾನ ಮಾಡಲಾಯಿತು.

ಈ ಸಂದರ್ಭದಲ್ಲಿ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಮತ್ತು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸೇರಿದಂತೆ ಕೇಂದ್ರ ಸಚಿವರು ಮತ್ತು ಸಶಸ್ತ್ರ ಪಡೆಗಳ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಸಶಸ್ತ್ರ ಪಡೆಗಳು, ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳು ಮತ್ತು ಇತರ ಭದ್ರತಾ ಸಂಸ್ಥೆಗಳ ಸಿಬ್ಬಂದಿಯ ಅಸಾಧಾರಣ ಶೌರ್ಯ ಕಾರ್ಯಗಳನ್ನು ಗುರುತಿಸಿ, ಈ ಪ್ರಶಸ್ತಿಗಳನ್ನು ನೀಡಲಾಗುತ್ತದೆ.

---

ಉಪರಾಷ್ಟ್ರಪತಿ ಮತ್ತು ರಾಜ್ಯಸಭಾ ಸಭಾಪತಿ ಸಿ.ಪಿ.ರಾಧಾಕೃಷ್ಣನ್ ಅವರು ನವದೆಹಲಿಯ ಸಂಸತ್ ಭವನದಲ್ಲಿ ಇಂದು ನೂತನವಾಗಿ ಆಯ್ಕೆಯಾದ ಮತ್ತು ಮರು ಆಯ್ಕೆಯಾದ ಎಂಟು ಮಂದಿ ರಾಜ್ಯಸಭಾ ಸದಸ್ಯರಿಗೆ ಪ್ರಮಾಣ ವಚನ ಬೋಧಿಸಿದರು.

ಈ ಸದಸ್ಯರಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಕರ್ನಾಟಕದಿಂದ ಬಿಜೆಪಿಯ ಎಂ.ನಾಗರಾಜ, ಪಂಜಾಬ್‌ನಿಂದ ತರುಣ್ ಚುಗ್, ಗುಜರಾತ್‌ನಿಂದ ಮಾನ್ಸಿಂಗ್ ಮೆರಾಮನ್ ಪರ್ಮಾರ್ ಮತ್ತು ಜಿತೇಂದ್ರ ಮೇಘಜಿಭಾಯ್ ಕಂಜಾರಿಯಾ, ರಾಜಸ್ಥಾನದಿಂದ ಡಾ. ಅಲ್ಕಾ ಸಿಂಗ್, ಮಣಿಪುರದಿಂದ ಅಧಿಕಾರಿಮಾಯುಂ ಶಾರದಾ ದೇವಿ ಮತ್ತು ಮಹಾರಾಷ್ಟ್ರದಿಂದ ಎನ್‌ಸಿಪಿ ನಾಯಕ ರಾಜೇಂದ್ರ ಹಿರಾಲಾಲ್ ಜೈನ್ ಸೇರಿದ್ದಾರೆ.

ಈ ವೇಳೆ ರಾಜ್ಯಸಭಾ ಉಪಸಭಾಪತಿ ಹರಿವಂಶ್, ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಸದನದ ನಾಯಕ ಹಾಗೂ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜಗತ್ ಪ್ರಕಾಶ್ ನಡ್ಡಾ ಉಪಸ್ಥಿತರಿದ್ದರು.

---

ತಮ್ಮ ಸೆಶೆಲ್ಸ್ ಭೇಟಿಯು ಭಾರತ-ಸೆಶೆಲ್ಸ್ ಸ್ನೇಹವನ್ನು ಹೆಚ್ಚಿಸುವ ಮಹತ್ವದ ಫಲಿತಾಂಶಗಳಿಂದ ಕೂಡಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಅವರು, ಕಳೆದ ಐವತ್ತು ವರ್ಷಗಳಲ್ಲಿ, ಎರಡೂ ದೇಶಗಳ ನಡುವಿನ ಸಂಬಂಧವು ಆಳವಾದ ನಂಬಿಕೆ ಮತ್ತು ಹಂಚಿಕೆಯ ಪ್ರಗತಿಯಿಂದ ಗುರುತಿಸಲ್ಪಟ್ಟಿದೆ. ಮುಂದಿನ ಐವತ್ತು ವರ್ಷಗಳು, ನಾವೀನ್ಯತೆ, ಸುಸ್ಥಿರತೆ ಮತ್ತು ಹಂಚಿಕೆಯ ಬದ್ಧತೆಯಿಂದ ವ್ಯಾಖ್ಯಾನಿಸಲ್ಪಡುತ್ತವೆ ಎಂದು ತಿಳಿಸಿದರು.

---

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಸಮ್ಮುಖದಲ್ಲಿ ಹರಿಯಾಣ ಮತ್ತು ರಾಜಸ್ಥಾನ ಸರ್ಕಾರಗಳು ನವದೆಹಲಿಯಲ್ಲಿ ಇಂದು ಯಮುನಾ ಜಲ ಯೋಜನೆಯ ನಿರ್ಮಾಣ ಮತ್ತು ಅನುಷ್ಠಾನ ಒಪ್ಪಂದಕ್ಕೆ ಸಹಿ ಹಾಕಿವೆ.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಅಮಿತ್ ಶಾ, ಹರಿಯಾಣ ಮತ್ತು ರಾಜಸ್ಥಾನದ ಜನರು ಎದುರಿಸುತ್ತಿರುವ ಸುಮಾರು ಮೂರು ದಶಕಗಳಷ್ಟು ಹಳೆಯದಾದ ನೀರಿನ ಸಂಬಂಧಿತ ಸಮಸ್ಯೆಯನ್ನು ಈ ಒಪ್ಪಂದ ಪರಿಹರಿಸಿದೆ. ಈ ಒಪ್ಪಂದ, ಪ್ರಧಾನಿ ನರೇಂದ್ರ ಮೋದಿ ಅವರ 'ಸಂವಾದದ ಮೂಲಕ ಪರಿಹಾರ' ಎಂಬ ಮಂತ್ರಕ್ಕೆ ಅತ್ಯುತ್ತಮ ಉದಾಹರಣೆಯಾಗಿದೆ ಎಂದು ಹೇಳಿದರು.

ಈ ಒಪ್ಪಂದದಡಿ, ಮುಂದಿನ ತಿಂಗಳಿನಿಂದ ಅಕ್ಟೋಬರ್ ವರೆಗೆ ಯಮುನಾ ಕಾಲುವೆಯಿಂದ ರಾಜಸ್ಥಾನಕ್ಕೆ ಸುಮಾರು ೫೮೦ ದಶಲಕ್ಷ ಕ್ಯೂಬಿಕ್ ಮೀಟರ್ ನೀರನ್ನು ಮೂರು ಭೂಗತ ಪೈಪ್‌ಲೈನ್‌ಗಳ ಮೂಲಕ ಪೂರೈಸಲಾಗುವುದು. ಈ ಪೈಪ್‌ಲೈನ್‌ಗಳು ರಾಜಸ್ಥಾನ ಮತ್ತು ಹರಿಯಾಣ ಎರಡೂ ರಾಜ್ಯಗಳ ಜನರಿಗೆ ಕುಡಿಯುವ ನೀರನ್ನು ಒದಗಿಸುತ್ತವೆ ಎಂದು ಅವರು ಮಾಹಿತಿ ನೀಡಿದರು.

ಈ ಒಪ್ಪಂದವು ಹಣಕಾಸಿನ ಜವಾಬ್ದಾರಿಗಳು, ವೆಚ್ಚ ಹಂಚಿಕೆ, ನೀರು ಹಂಚಿಕೆ, ನೀರು ಬಿಡುಗಡೆ ಶಿಷ್ಟಾಚಾರಗಳು ಮತ್ತು ನಿರ್ವಹಣಾ ವ್ಯವಸ್ಥೆಗಳನ್ನು ಎಚ್ಚರಿಕೆಯಿಂದ ಪರಿಹರಿಸಿದೆ ಎಂದು ಸಚಿವ ಅಮಿತ್ ಶಾ ತಿಳಿಸಿದರು.

---

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇಂದು ನವದೆಹಲಿಯಲ್ಲಿ ಕಾರ್ಯತಂತ್ರದ ಸಂಶೋಧನೆ ಮತ್ತು ಅಭಿವೃದ್ಧಿ ಯೋಜನೆಗಳ ದಕ್ಷತೆ, ಹೊಣೆಗಾರಿಕೆ ಮತ್ತು ಸಕಾಲಿಕ ಅನುಷ್ಠಾನವನ್ನು ಹೆಚ್ಚಿಸುವ ಪ್ರಮುಖ ಸುಧಾರಣೆಯಾದ ಡಿಆರ್‌ಡಿಒ ಗೆ ನಿಯೋಜಿತ ಆರ್ಥಿಕ ಅಧಿಕಾರ ಡಿಎಫ್‌ಪಿ-೨೦೨೬ ಅನ್ನು ಬಿಡುಗಡೆ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ರಾಜನಾಥ್ ಸಿಂಗ್, ಡಿಎಫ್‌ಪಿ-೨೦೨೬ ಉದ್ಯಮ ಮತ್ತು ಶೈಕ್ಷಣಿಕ ವಲಯದೊಂದಿಗೆ ಬಲವಾದ ಸಹಯೋಗವನ್ನು ಬೆಳೆಸುತ್ತದೆ. ಆತ್ಮನಿರ್ಭರ ಭಾರತದ ದೃಷ್ಟಿಕೋನವನ್ನು ಬಲಪಡಿಸುತ್ತದೆ. ರಕ್ಷಣಾ ತಂತ್ರಜ್ಞಾನಗಳಲ್ಲಿ ಹೆಚ್ಚಿದ ಸ್ವಾವಲಂಬನೆಗೆ ಕೊಡುಗೆ ನೀಡುತ್ತದೆ ಮತ್ತು ರಾಷ್ಟ್ರದ ರಕ್ಷಣಾ ಸನ್ನದ್ಧತೆಯನ್ನು ಬಲಿಷ್ಠಗೊಳಿಸುತ್ತದೆ ಎಂದು ಹೇಳಿದರು.

ಡಿಎಫ್‌ಪಿ-೨೦೨೬ ರಕ್ಷಣಾ ಇಲಾಖೆಯೊಳಗೆ ವಿವಿಧ ಹಂತಗಳಲ್ಲಿ ಕ್ರಿಯಾತ್ಮಕ ಸಬಲೀಕರಣವನ್ನು ಗಮನಾರ್ಹವಾಗಿ ಹೆಚ್ಚಿಸುವ ಗುರಿ ಹೊಂದಿದೆ. ಇದು ಹಲವಾರು ನಿರ್ಣಾಯಕ ಅವಶ್ಯಕತೆಗಳನ್ನು ಪೂರೈಸುತ್ತದೆ. ಇದರಲ್ಲಿ ಪ್ರಾಯೋಗಿಕ ಅಭಿಯಾನಗಳು, ಪರೀಕ್ಷೆಗಳು ಮತ್ತು ಮೌಲ್ಯಮಾಪನ ಚಟುವಟಿಕೆಗಳು ಹಾಗೂ ಇತರ ಕಾರಣಗಳಿಗೆ ಮೀಸಲಾದ ಹಣಕಾಸು ನಿಬಂಧನೆಗಳು ಸೇರಿವೆ ಎಂದು ರಕ್ಷಣಾ ಸಚಿವಾಲಯ ಹೇಳಿದೆ.

ಈ ಸಂದರ್ಭದಲ್ಲಿ ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಎನ್.ಎಸ್. ರಾಜಾ ಸುಬ್ರಮಣಿ, ಡಿಆರ್‌ಡಿಒ ಅಧ್ಯಕ್ಷ ರಾಜೇಶ್ ಕುಮಾರ್ ಸಿಂಗ್ ಉಪಸ್ಥಿತರಿದ್ದರು.

---

ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿ-ಸಿಬಿಎಸ್‌ಇ, ತ್ರಿಭಾಷಾ ನೀತಿಗೆ ಸಂಬಂಧಿಸಿದಂತೆ ಮಾರ್ಗಸೂಚಿ ಪ್ರಕಟಿಸಿದೆ.

ಪ್ರಸ್ತುತ, ೧೦ನೇ ತರಗತಿಯ ವಿದ್ಯಾರ್ಥಿಗಳಿಗೆ ಹೊಸ ಭಾಷಾ ಸೂತ್ರ ಅನ್ವಯವಾಗುವುದಿಲ್ಲ ಎಂದು ಸ್ಪಷ್ಟಪಡಿಸಿದೆ.

ಅದೇ ರೀತಿ ೭, ೮ ಹಾಗೂ ೯ನೇ ತರಗತಿಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳು ಮುಂದಿನ ದಿನಗಳಲ್ಲಿ ೧೦ನೇ ತರಗತಿಗೆ ಬಂದಾಗ ಮೂರನೇ ಭಾಷೆಯಲ್ಲಿ ಬೋರ್ಡ್ ಪರೀಕ್ಷೆ ಬರೆಯುವ ಅಗತ್ಯವಿಲ್ಲ ಎಂದು ತಿಳಿಸಿದೆ.

ಈ ತರಗತಿಗಳಲ್ಲಿ ಈಗಾಗಲೇ ಎರಡು ವಿದೇಶಿ ಭಾಷೆಗಳನ್ನು ಆಯ್ಕೆ ಮಾಡಿಕೊಂಡಿರುವ ವಿದ್ಯಾರ್ಥಿಗಳು ಅದೇ ಆಯ್ಕೆಯನ್ನು ಮುಂದುವರೆಸಬಹುದು. ಜೊತೆಗೆ ಒಂದು ಹೆಚ್ಚುವರಿ ಸ್ಥಳೀಯ ಭಾರತೀಯ ಭಾಷೆ ಕಲಿಯಲು ಅವಕಾಶ ನೀಡಲಾಗುವುದು. ಅಧ್ಯಯನ ಸಾಮಗ್ರಿಗಳನ್ನು ಕಾಲಮಿತಿಯೊಳಗೆ ಲಭ್ಯವಾಗುವಂತೆ ಮಾಡಲಾಗುವುದು ಎಂದು ಸಿಬಿಎಸ್‌ಇ ಹೇಳಿದೆ.

---

ಬ್ರಿಕ್ಸ್ ವಾಣಿಜ್ಯ ಮತ್ತು ಕೈಗಾರಿಕಾ ಮಂಡಳಿ ನಿಯೋಗ ಇಂದು ನವದೆಹಲಿಯಲ್ಲಿ ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿತು.

ಬ್ರಿಕ್ಸ್ ಮತ್ತು ಬ್ರಿಕ್ಸ್ ಪ್ಲಸ್ ಪರಿಸರ ವ್ಯವಸ್ಥೆಯಾದ್ಯಂತ ಉದ್ಯಮ ನೇತೃತ್ವದ ಜಾಗತಿಕ ತೊಡಗಿಸಿಕೊಳ್ಳುವಿಕೆ ಮತ್ತು ಸಹಯೋಗವನ್ನು ನಾವೀನ್ಯತೆ, ಸ್ಟಾರ್ಟ್‌ಅಪ್‌ಗಳು, ಉದಯೋನ್ಮುಖ

ತಂತ್ರಜ್ಞಾನ, ಸಂಶೋಧನಾ ಸಹಯೋಗ ಮತ್ತು ಉದ್ಯಮಶೀಲತೆಯ ಮೂಲಕ ಬಲಪಡಿಸುವತ್ತ ಸಭೆ ಗಮನಹರಿಸಿತು.

ಸಭೆಯನ್ನುದ್ದೇಶಿಸಿ ಮಾತನಾಡಿದ ಡಾ. ಜಿತೇಂದ್ರ ಸಿಂಗ್, ಜಾಗತಿಕ ನಾವೀನ್ಯತೆ ಕೇಂದ್ರವಾಗಿ ಭಾರತದ ಬೆಳೆಯುತ್ತಿರುವ ಸ್ಥಾನಮಾನ ಮತ್ತು ಉದಯೋನ್ಮುಖ ತಂತ್ರಜ್ಞಾನಗಳಲ್ಲಿ ಅದರ ನಾಯಕತ್ವವು ರಾಷ್ಟ್ರೀಯ ಬೆಳವಣಿಗೆ ಮತ್ತು ಜಾಗತಿಕ ಅಭಿವೃದ್ಧಿಗೆ ಕೊಡುಗೆ ನೀಡುವ ಬಲವಾದ ಅಂತಾರಾಷ್ಟ್ರೀಯ ಪಾಲುದಾರಿಕೆಗಳನ್ನು ನಿರ್ಮಿಸಲು ಕೈಗಾರಿಕಾ ಸಂಸ್ಥೆಗಳಿಗೆ ಸೂಕ್ತ ಅವಕಾಶವನ್ನು ಒದಗಿಸುತ್ತವೆ ಎಂದು ಹೇಳಿದರು.

ಬಾಹ್ಯಾಕಾಶ, ಜೈವಿಕ ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ, ಪರಮಾಣು ಶಕ್ತಿ ಮತ್ತು ಆಳವಾದ ತಂತ್ರಜ್ಞಾನದಂತಹ ಕ್ಷೇತ್ರಗಳಲ್ಲಿ ಭಾರತ ಗಮನಾರ್ಹ ಪ್ರಗತಿ ಕಂಡಿದೆ ಮತ್ತು ಜಾಗತಿಕ ಸಹಯೋಗಕ್ಕೆ ಹೊಸ ಮಾರ್ಗಗಳನ್ನು ತೆರೆಯುತ್ತದೆ ಎಂದು ಅವರು ತಿಳಿಸಿದರು.

---

ಜಗತ್ತು ಅತ್ಯಂತ ಕೆಟ್ಟ ಇಂಧನ ಬಿಕ್ಕಟ್ಟನ್ನು ಎದುರಿಸಿದಾಗಲೂ, ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಭಾರತ, ಇಂಧನ ಗ್ರಾಹಕರನ್ನು ಯಾವುದೇ ನಕಾರಾತ್ಮಕ ಪರಿಣಾಮಗಳಿಂದ ಪರಿಣಾಮಕಾರಿಯಾಗಿ ರಕ್ಷಿಸಿದೆ ಎಂದು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಹೇಳಿದ್ದಾರೆ.

ಲೇಖನವೊಂದರಲ್ಲಿ ಸಚಿವರು, ಇಂದು ಸಂಗ್ರಹಣಾಗಾರಗಳು ತುಂಬಿವೆ. ಪ್ರಸ್ತುತ ಭಾರತ ೪೧ ದೇಶಗಳಿಂದ ಕಚ್ಚಾ ತೈಲ ಆಮದು ಮಾಡಿಕೊಳುತ್ತಿದೆ. ಹಾರ್ಮುಜ್ ಜಲಸಂಧಿ ಬಂದ್ ಆಗಿದ್ದಾಗ, ಪರಿಸ್ಥಿತಿಯನ್ನು ನಿಭಾಯಿಸಲು ಕೇಂದ್ರ ಸರ್ಕಾರ ವಿವಿಧ ಕ್ರಮಗಳನ್ನು ತೆಗೆದುಕೊಂಡಿತು ಎಂದು ತಿಳಿಸಿದ್ದಾರೆ.

---

ಶ್ರೀಲಂಕಾದಲ್ಲಿ ನಡೆದ ಭದ್ರತಾ ಸಮ್ಮೇಳನದ ಸಂದರ್ಭದಲ್ಲಿ ಭಾರತ ಮತ್ತು ಪಾಕಿಸ್ತಾನ ಸಂವಾದ ನಡೆಸಿವೆ ಎಂಬ ವರದಿಗಳನ್ನು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ತಳ್ಳಿಹಾಕಿದ್ದಾರೆ.

ಸಂವಾದದ ವರದಿಗಳ ಕುರಿತಾದ ಪ್ರಶ್ನೆಗಳಿಗೆ ಉತ್ತರಿಸಿದ ಅವರು, ಅಂತಹ ಯಾವುದೇ ಸಂವಾದಗಳು ನಡೆದಿಲ್ಲ. ಭಾರತ ಸರ್ಕಾರಕ್ಕೆ ಸಂಬಂಧಿಸಿದಂತೆ, ಇಂತಹ ಕಾರ್ಯಕ್ರಮಗಳಲ್ಲಿ

ಯಾವುದೇ ಅಧಿಕೃತ ಭಾಗವಹಿಸುವಿಕೆ, ಬೆಂಬಲ ಅಥವಾ ಒಳಗೊಳ್ಳುವಿಕೆ ಇಲ್ಲ ಎಂದು ತಿಳಿಸಿದರು.

---

ಪಾಕಿಸ್ತಾನದ ಭದ್ರತಾ ಪಡೆಗಳು ನಿನ್ನೆ ರಾತ್ರಿ ಅಫ್ಘಾನಿಸ್ತಾನ ಗಡಿಯಲ್ಲಿ ಪಕ್ತಿಯಾ, ಪಕ್ತಿಕಾ ಮತ್ತು ಕುನಾರ್ ಪ್ರಾಂತ್ಯಗಳ ಪ್ರದೇಶಗಳನ್ನು ಗುರಿಯಾಗಿಸಿಕೊಂಡು ವಾಯು ದಾಳಿ ನಡೆಸಿವೆ.

ದಾಳಿಯಲ್ಲಿ ಮಹಿಳೆಯರು ಮತ್ತು ಮಕ್ಕಳು ಸೇರಿದಂತೆ ೩೯ ನಾಗರಿಕರು ಸಾವನ್ನಪ್ಪಿದ್ದು, ೧೯೩ ಜನರು ಗಾಯಗೊಂಡಿದ್ದಾರೆ ಎಂದು ಅಫ್ಘಾನ್ ಸರ್ಕಾರದ ಉಪ ವಕ್ತಾರ ಹಮ್ದುಲ್ಲಾ ಫಿತ್ರತ್ ತಿಳಿಸಿದ್ದಾರೆ.

ಪಕ್ತಿಯಾ ಪ್ರಾಂತ್ಯ, ಪಕ್ತಿಕಾ ಪ್ರಾಂತ್ಯದ ಜಾನಿ ಖೇಲ್ ಜಿಲ್ಲೆಯ ವಾಲೋಶ್ಟ್ ಗ್ರಾಮ, ಕುನಾರ್ ಪ್ರಾಂತ್ಯದ ಮರವಾರಾ ಜಿಲ್ಲೆಯ ಬರೋಲೋ ಗ್ರಾಮದ ಮೇಲೆ ಪಾಕಿಸ್ತಾನಿ ಪಡೆಗಳು ವಾಯು ದಾಳಿ ನಡೆಸಿವೆ ಎಂದು ಅವರು ಮಾಹಿತಿ ನೀಡಿದ್ದಾರೆ.

---

ಯುಎಸ್ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿಯ ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಇಂದು ಭಾರತದ ಶಟ್ಲರ್ ಕಿಡಂಬಿ ಶ್ರೀಕಾಂತ್ ಬೆಳ್ಳಿ ಪದಕ ಗೆದ್ದಿದ್ದಾರೆ. ಫೈನಲ್ ಪಂದ್ಯದಲ್ಲಿ ರನ್ನರ್-ಅಪ್ ಆಗುವ ಮೂಲಕ ಅವರು ಬೆಳ್ಳಿ ಪದಕಕ್ಕೆ ತೃಪ್ತಿಪಟ್ಟರು.

ಫೈನಲ್‌ನಲ್ಲಿ ಚೈನೀಸ್ ತೈಪೆಯ ಸು ಲಿ-ಯಾಂಗ್ ವಿರುದ್ಧ ಸೆಣಸಿದ ಶ್ರೀಕಾಂತ್, ೧೫-೨೧, ೨೧-೧೯, ೬-೨೧ ಅಂತರದಿಂದ ಸೋಲು ಅನುಭವಿಸಿದರು.

__________ ಮುಕ್ತಾಯ __________